# ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ

**ಅಧಿಸೂಚನೆ ಸಂಖ್ಯೆಃ ಜಿನ್ಯಾಯಾಃ ಆಡಳಿತಃ 01/2023 ದಿನಾಂಕಃ 28.03.2023**

**ವಿಷಯ** ಃ ಶೀಘ್ರಲಿಪಿಗಾರರು-ಗ್ರೇಡ್-3 ಹುದ್ದೆಗಳ ನೇಮಕಾತಿ ಬಗ್ಗೆ.

**ಉಲ್ಲೇಖ**

1. ಸರ್ಕಾರಿ ಆದೇಶ ಸಂಃಲಾ-137-ಎಲ್‌ಸಿಇ 2014, ದಿನಾಂಕ ಃ 26.03.2015 ಯಾದಗಿರಿ ಜಿಲ್ಲೆಯ ನೂತನ ನ್ಯಾಯಾಲಯಗಳಿಗೆ ಹುದ್ದೆಗಳನ್ನು ಮಂಜೂರು ಮಾಡಿದ ಬಗ್ಗೆ.
2. ಕರ್ನಾಟಕ ಉಚ್ಛ ನ್ಯಾಯಾಲಯದ ಪತ್ರದ ಸಂಖ್ಯೆಃ ಎಲ್‌ಸಿಎ–II 236ಃ 2012 ದಿನಾಂಕ ಃ 04.04.2016 ರನ್ವಯ ಯಾದಗಿರಿ ಜಿಲ್ಲೆಯ ಹೊಸ ನ್ಯಾಯಾಲಯಗಳಿಗೆ ಹುದ್ದೆಗಳನ್ನು ಮಂಜೂರು ಮಾಡಿದ ಬಗ್ಗೆ.
3. ಕರ್ನಾಟಕ ಉಚ್ಛ ನ್ಯಾಯಾಲಯದ ಪತ್ರದ ಸಂಖ್ಯೆಃ ಎಲ್‌ಸಿಎ–II 128ಃ 2012 ದಿನಾಂಕ ಃ 23.08.2016 **ಮತ್ತು** ದಿನಾಂಕ ಃ 13.02.2017 ಶೀಘ್ರಲಿಪಿಗಾರರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿದ ಬಗ್ಗೆ.
4. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) (ನೇಮಕಾತಿ) ನಿಯಮ 1982 (ತಿದ್ದುಪಡಿ) ನಿಯಮ 2007.
5. ಕರ್ನಾಟಕ ನಾಗರಿಕ ಸೇವಾ ಸಾಮಾನ್ಯ ನೇಮಕಾತಿ ನಿಯಮ–1977 ಮತ್ತು ತಿದ್ದುಪಡಿ ನಿಯಮ 2020.
6. ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ **01** ಸೆಹಿಮ **2022** ಬೆಂಗಳೂರು ದಿನಾಂಕ **28.12.2022-**ರಾಜ್ಯ ಸಿವಿಲ್ ಸೇವೆಗಳ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಪರಿಷ್ಕೃತ ರೋಸ್ಟರ್ ಪ್ರತಿಸ್ಥಾಪನೆ.
7. ಕಚೇರಿ ಟಿಪ್ಪಣಿ ದಿ ಃ 20.03.2023 ಮಾಡಿದ ಆದೇಶ

*****

ಮೇಲ್ಕಂಡ ಉಲ್ಲೇಖಗಳ ಅನ್ವಯ ಗೌರವಾನ್ವಿತ **ಉಚ್ಛ** ನ್ಯಾಯಾಲಯ**ವು 06** ಶ್ರೀಘ್ರಲಿಪಿಗಾರರು-ಗ್ರೇಡ್-3 ಹುದ್ದೆಗಳನ್ನು *ON-LINE* ಮೂಲಕ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿರುತ್ತಾರೆ.

## ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ವಿವರ ಃ

| | |
|---|---|
| ಆನ್‌ಲೈನ್ ಅರ್ಜಿ ಸಲ್ಲಿಸಲು ಆರಂಭವಾಗುವ ದಿನಾಂಕ | ಃ **31/03/2023** |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | ಃ **29/04/2023** |
| ಸಮಯ | ಃ ರಾತ್ರಿ 11.59 ಗಂಟೆಯವರೆಗೆ. |
| ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕೊನೆಯ ದಿನಾಂಕ | ಃ **03-05-2023** |

ಕಲ್ಯಾಣ-**ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಸ್ಥಳೀಯ ಹುದ್ದೆಗಳಿಗೆ ಗುರುತಿಸಿರುವ ಮೀಸಲಾತಿ**

## (Local Cadre) :

***1)*** ಶ್ರೀಘ್ರಲಿಪಿಗಾರರು-ಗ್ರೇಡ್-3 **: Stenographers-Grade-III**

**ಖಾಲಿ ಹುದ್ದೆಗಳು: 06**

**ವೇತನ ಶ್ರೇಣಿ : 27650-650-29600-750-32600-850-36000-950- 39800-1100-46400-1250-52650 ಮತ್ತು ಇತರೆ ಭತ್ಯೆಗಳು.**

| | ಇತರೇ | ಮಹಿಳೆಯರು | ಗ್ರಾಮೀಣ | ಒಟ್ಟು |
|---|---|---|---|---|
| ಪರಿಶಿಷ್ಟ ಜಾತಿ | 01 | - | - | 01 |
| ಪರಿಶಿಷ್ಟ ಪಂಗಡ | 01 | - | - | 01 |
| ಪ್ರವರ್ಗ-1 | 01 | - | - | 01 |
| ಸಾಮಾನ್ಯ ಅಭ್ಯರ್ಥಿ | 01 | 01 | 01 | 03 |
| ಒಟ್ಟು | 04 | 01 | 01 | 06 |

*** ಉಳಿಕೆ ಮೂಲ ವೃಂದದಲ್ಲಿ ಯಾವುದೇ ಹುದ್ದೆಗಳು ಖಾಲಿ ಇರುವುದಿಲ್ಲ.**

**ವಿದ್ಯಾರ್ಹತೆ**

1 ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ವರ್ಷದ ಪದವಿ ಪೂರ್ವ ಶಿಕ್ಷಣ ಕೋರ್ಸಿನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

2 ಕರ್ನಾಟಕ ಸರ್ಕಾರದ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿಯಲ್ಲಿ ಪ್ರೌಢ ದರ್ಜೆ (ಸೀನಿಯರ ಗ್ರೇಡ) ಮತ್ತು ಕನ್ನಡ ಮತ್ತು ಆಂಗ್ಲ ಭಾಷೆಯ ಬೆರಳಚ್ಚು ಪ್ರೌಢ ದರ್ಜೆ (ಸೀನಿಯರ ಗ್ರೇಡ) ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ ಪದವಿಯೊಂದಿಗೆ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯವನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**ಆಯ್ಕೆ ವಿಧಾನ :**

ಕರ್ನಾಟಕ ಅಧೀನ ನ್ಯಾಯಾಲಯಗಳು (**ಮಿನಿಸ್ಟೀರಿಯಲ್** ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು (ತಿದ್ದುಪಡಿ) ನಿಯಗಳು 2007ರ ಅನ್ವಯ **ಅಭ್ಯರ್ಥಿಗಳಿಗೆ ಕನ್ನಡ ಹಾಗೂ ಇಂಗ್ಲೀಷ ಭಾಷೆಗಳಲ್ಲಿ ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 5 ನಿಮಿಷಗಳ ಉಕ್ತಲೇಖನ ನೀಡಿ ನಂತರ 45 ನಿಮಿಷಗಳ ಅವಧಿಯಲ್ಲಿ ಬೆರಳಚ್ಚುಯಂತ್ರ/ಗಣಕಯಂತ್ರದ ಮೇಲೆ ಲಿಪ್ಯಂತರ ಮಾಡಲು ಹೇಳಲಾಗುವುದು.**

**ಟಿಪ್ಪಣಿ** : ಸಾಮರ್ಥ ಪರೀಕ್ಷೆಯು ಕನ್ನಡ ಹಾಗೂ ಇಂಗ್ಲೀಷ ಎರಡರಲ್ಲಿಯೂ **ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಟ 50** ಅಂಕಗಳನ್ನು ಎರಡರಲ್ಲಿಯೂ **ಪಡೆಯಬೇಕು ಮತ್ತು ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.**

ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮದಲ್ಲಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ **ಮಾ**ಡಲಾಗುವುದು.

**:: ವಯೋಮಿತಿ (ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ) ::**

**ಕನಿಷ್ಠ ವಯೋಮಿತಿ** : 18 ವರ್ಷ.

**ಗರಿಷ್ಠ ವಯೋಮಿತಿ** : ಸಾಮಾನ್ಯ ವರ್ಗ-35 ವರ್ಷ.
2ಎ/2ಬಿ/3ಎ/3ಬಿ- 38 ವರ್ಷ.
ಪ.ಜಾ:ಪ.ಪಂ:ಪ್ರ.ವರ್ಗ-I-40 ವರ್ಷ.

ಸರಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**<u>ಪರಿವೀಕ್ಷಣಾ ಅವಧಿ:</u>**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

**<u>ಕಂಪ್ಯೂಟರ ಸಾಕ್ಷರತಾ ಪರೀಕ್ಷೆ:</u>**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ:43:ಸೇವನೇ:2008 ಬೆಂಗಳೂರು ದಿನಾಂಕ: 07-03-2012ರಂತೆ ನಿಗದಿಪಡಿಸುವ ಕಂಪ್ಯೂಟರ ಸಾಕ್ಷರತಾ ಪರೀಕ್ಷೆಯನ್ನು ಪರಿವೀಕ್ಷಣಾ ಅವಧಿ **ಪೂರೈಸುವುದರ ಒಳಗಾಗಿ** ಶೇಕಡಾ 50 ರಂತೆ ಅಂಕಗಳನ್ನು ಪಡೆದು ಉತ್ತೀರ್ಣವಾಗತಕ್ಕದ್ದು.

**<u>ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:</u>**

**ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು** ಕ.ನಾ.ಸೇ ನಿಯಮಗಳು (ಸಾಮಾನ್ಯ ನೇಮಕಾತಿ) ನಿಯಮ **1977** ತಿದ್ದುಪಡಿ ನಿಯಮ **2020** ರೂಲ್ **11** ನ್ನು ಅನುಸರಿಸಲು ತಿಳಿಸಲಾಗಿದೆ.

**<u>ನಿಗದಿತ ಅರ್ಜಿ ಶುಲ್ಕ - ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ :</u>**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ-2ಎ, 2ಬಿ, 3ಎ, 3ಬಿಗೆ ಸೇರಿದ ಅಭ್ಯರ್ಥಿಗಳಿಗೆ. | ರೂ.200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ರೂ.100/- |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/yadgir-onlinerecruitment ರಲ್ಲಿ ನೀಡಲಾದ ಲಿಂಕ ಮುಖಾಂತರ ಭಾರತೀಯ ಸ್ಟೇಟ್ ಬ್ಯಾಂಕನ ಎಸ್.ಬಿ.ಐ. ಕಲೆಕ್ಟ ಮೂಲಕ online payment through net banking /credit / debit card/ challan download ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. **ಶುಲ್ಕವನ್ನು ಆನ್‌ಲೈನ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬಸೈಟ ಮೂಲಕ ಡೌನಲೋಡ ಮಾಡಿಕೊಂಡ ಅದರ ಪ್ರಿಂಟಔಟನ್ನು ಪಡೆದುಕೊಂಡು ಸ್ಟೇಟ್ ಬ್ಯಾಂಕ ಆಫ ಇಂಡಿಯಾದ ಯಾವುದೇ ಶಾಖೆಗೆ ಹಾಜರು ಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು.** ಇದನ್ನು ಹೊರತುಪಡಿಸಿ ಯಾವುದೇ ಡಿಮಾಂಡ್ ಡ್ರಾಫ್ಟ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು ಃ

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಒಂದು ವೇಳೆ ಅರ್ಜಿ **ಸರಿಯಾಗಿರದಿದ್ದಲ್ಲಿ** ತಿರಿಸ್ಕರಿಸಲಾಗುವುದು.
2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.
3. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   - ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ 5cm ಉದ್ದ x 3.6cm ಅಗಲವುಳ್ಳದ್ದಾಗಿರಬೇಕು ಮತ್ತು 50ಕೆಬಿ ಅಳತೆಯದ್ದಾಗಿರಬೇಕು. ಭಾವಚಿತ್ರದ ಹಿಂಬದಿಯು ತಿಳಿಬಣ್ಣದ್ದಾಗಿದ್ದು ಅದರಲ್ಲಿಯೂ ಹಿಂಬದಿಯ ಭಾಗ ಬಿಳಿಬಣ್ಣದ್ದಾಗಿರಬೇಕು.
   - ಬ) ಭಾವಚಿತ್ರವನ್ನು ಒಂದು ಬಿಳಿ ಹಾಳೆಯ ಮೇಲೆ ಇಟ್ಟು ಅದರ ಕೆಳಗೆ ಕಪ್ಪು ಬಾಲಪಾಯಿಂಟ ಪೆನ್ನಿನಲ್ಲಿ ಸಹಿಯನ್ನು ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).
4. ತದನಂತರ documents upload button ಅನ್ನು ಒತ್ತಿ ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಬಗ್ಗೆ ಚಲನ್ ಪ್ರತಿಯನ್ನು *down load* ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವರೆಗೂ ತಮ್ಮ ಹತ್ತಿರ ಕಾಯ್ದಿರಿಸಕೊಳ್ಳತಕ್ಕದು.

5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ **ಕೊನೆಯ** ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

6. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://districts.ecourts.gov.in/yadgir ನಲ್ಲಿ **29.04.2023** ದಿನಾಂಕದವರೆಗೂ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು ಃ ಸಲ್ಲಿಸಲು **29.04.2023 ರ ರಾತ್ರಿ 23:59** ರವರೆಗೆ ಅವಕಾಶವಿರುತ್ತದೆ ಮತ್ತು ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು **03.05.2023** ಕಡೆಯ ದಿನಾಂಕವಾಗಿದ್ದು ಅದರೊಳಗೆ ಭಾರತೀಯ ಸ್ಟೇಟ್ ಬ್ಯಾಂಕ್ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

7. ಅರ್ಹ ಅಭ್ಯರ್ಥಿಗಳಿಗೆ SMS ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಅಭ್ಯರ್ಥಿಯು ಸದರೀ ಪಟ್ಟಿಯನ್ನು ಡೌನಲೋಡ್ ಮಾಡಿಕೊಂಡು ಸಂದರ್ಶನಕ್ಕೆ ಹಾಜರಾಗುವಾಗ ತಪ್ಪದೇ ಹಾಜರುಪಡಿಸತಕ್ಕದ್ದು.

8. ಅಭ್ಯರ್ಥಿಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಗಳಲ್ಲಿ *ON-LINE* ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿ ಪಡಿಸಿದ ಕೊನೆಯ ದಿನಾಂಕದ **ಒಳಗೆ** ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಕೋರಿರುವ ಮೀಸಲಾತಿ ಪ್ರಮಾಣ ಪತ್ರಗಳು ಮತ್ತು ಇತರೆ ಪ್ರಮಾಣ ಪತ್ರಗಳನ್ನು ಕೊನೆಯ ದಿನಾಂಕದೊಳಗೆ ಪಡೆ ದಿಟ್ಟುಕೊಂಡಿರತಕ್ಕದ್ದು ಹಾಗೂ ಅವುಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಹಾಜರು ಪಡಿಸಬೇಕು. ಇತರೆ ನಮೂನೆಗಳಲ್ಲಿ ಅಥವಾ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ (ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಹೊರತು ಪಡಿಸಿ) ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ, ತಪ್ಪಿದ್ದಲ್ಲಿ ಇವರ ಮೀಸಲಾತಿಯನ್ನು ಃ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

   ಅ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ಚಲನ್ ಃ ವಿವರದ ಪ್ರತಿ.
   ಆ) ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ವರ್ಗಾವಣೆ ಪಟ್ಟಿ/ಕ್ಯುಮುಲೇಟೀವ್ ರೆಕಾರ್ಡ್ ದಾಖಲಾತಿಗಳು.
   ಇ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ಯಲ್ಲಿ ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿಗೆ **ಸೇರಿದ** ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.

ಈ) ಗ್ರಾಮೀಣ ಮೀಸಲಾತಿಯನ್ನು **ಕೋರುವ** ಅರ್ಭರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ **ಪ್ರಾಧಿಕಾ ರದಿಂದ** ಪಡೆದು ಸಲ್ಲಿಸಬೇಕು.

ಉ) ಕನ್ನಡ ಮಾಧ್ಯಮ ಮೀಸಲಾತಿಯನ್ನು **ಕೋರುವ** ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಹಾಗೂ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದು ಸಲ್ಲಿಸತಕ್ಕದ್ದು.

ಊ) ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿ ಪಡಿಸಿದನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

ಎ) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸ್ಥೆವೆಯಿಂದ ಬಿಡುಗಡೆಯೊದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಏ) **ವಿಧವೆಯರು**, ಜೀತ ಕಾರ್ಮಿಕರು ವಯೋಮಿತಿ ರಿಯಾಯ್ತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಐ) ಅಂಗವಿಕಲ ಮೀಸಲಾತಿ ಪ್ರಮೂಣ ಪತ್ರ (ವಯೋಮಿತಿ ಸಡಿಲಿಕೆಗಾಗಿ ಮೀಸಲಾತಿ ಕೋರಿದ್ದಲ್ಲಿ).

ಒ) **ಕಲ್ಯಾಣ-**ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗಾಗಿ ಅರ್ಜಿ ಸಲ್ಲಿಸುವವರು ಸರಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ಃ06ಃಪಿಎಲ್ಎಕ್ಸ್ಃ 2012 ದಿನಾಂಕಃ 06-12-2013ರಲ್ಲಿ **ಗೊತ್ತು**ಪಡಿಸಿದ ನಮೂನೆಯಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದ ಅರ್ಹತಾ ಪ್ರಮಾಣ ಪತ್ರ

ಓ) ಅರ್ಜಿಯನ್ನು ಕಳುಹಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರವನ್ನು ಸಲ್ಲಿಸುವುದು ಹಾಗೂ ಶಾಲಾ ನಡತೆ ಪ್ರಮಾಣ ಪತ್ರ.

ಔ) ನಿರಾಕ್ಷೇಪಣಾ ಪತ್ರ (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು **ಕ.ನಾ.ಸೇ ನಿಯಮಗಳು (ಸಾಮಾನ್ಯ ನೇಮಕಾತಿ) ನಿಯಮ 1977 ತಿದ್ದುಪಡಿ ನಿಯಮ 2020 ರೂಲ್ 11 ನ್ನು ಅನುಸರಿಸಲು ತಿಳಿಸಲಾಗಿದೆ).**

9) ಸರಕಾರದ ಸುತ್ತೋಲೆ ಸಂಖ್ಯೆ ಸಿಆಸುಇಃ78ಃಹೈಕಕೋಃ2014 ಬೆಂಗಳೂರು ದಿನಾಂಕಃ 22-05-2015 ರನ್ವಯ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಅಥವಾ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೂ ಅರ್ಜಿ ಸಲ್ಲಿಸುವ ಬಗ್ಗೆ ಅರ್ಜಿಯಲ್ಲಿ ವಿವ ರವಾಗಿ ತೋರಿಸಿರುವಂತೆ ಆಯ್ಕೆಗಳನ್ನು **ಮಾಡಲು** ಅಭ್ಯರ್ಥಿಗಳಿಗೆ **ಸೂಚಿಸಲಾಗಿದೆ.**

10) ಅಂತಿಮವಾಗಿ ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮತಿಕಾತಿಯ ಸಂಬಂಧದಲ್ಲಿ

ಯಾವುದೇ ಇತರೇ ಆಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು ಃ ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಚ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸಹಿ/-

**(ಜಿ.ನಂಜುಂಡಯ್ಯ)**

**ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ಯಾದಗಿರಿ.**

**ಅಧಿಸೂಚನೆಯ ನೆಕಲನ್ನು ಈ ಕೆಳಕಂಡವರ ಅವಗಾಹನೆಗಾಗಿ ಸಲ್ಲಿಸಲಾಗಿದೆ,**

ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು **ಇವರಿಗೆ ಮುಖ ಪತ್ರದೊಂದಿಗೆ.**

**ಅಧಿಸೂಚನೆಯ ನಕಲನ್ನು ಈ ಕೆಳಕಂಡವರಿಗೆ ರವಾನಿಸಲಾಗಿದೆ**

1. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಸಿಟಿ, ಬೆಂಗಳೂರು ಗ್ರಾಮಾಂತರ, ಮೈಸೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ವಿಜಯಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಧಾರವಾಢ ಗದಗ, ಹಾಸನ, **ಹಾವೇರಿ,** ಕೊಡಗು, ಕೋಲಾರ, ಕೊಪ್ಪಳ, ಮಂಗಳೂರು, ಮಂಡ್ಯ, ರಾಮನಗರ, ರಾಯಚೂರು, ತುಮಕೂರು, ಉಡುಪಿ, **ಶಿವಮೊಗ್ಗ** ಮತ್ತು ಕಾರವಾರ ಇವರಿಗೆ, **ನೇಮಕಾತಿ ಅದಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ**
2. ವಿಲೇಖನಾಧಿಕಾರಿಗಳು ನಗರ ಸಿವಿಲ್ ನ್ಯಾಯಾಲಯ, ಬೆಂಗಳೂರು, ಇವರಿಗೆ, ನೇಮಕಾತಿ ಅಧಿಸೂಚನಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿ.
3. ನಿರ್ದೇಶಕರು, ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
4. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ ಮೈಸೂರು ರಸ್ತೆ, ಬೆಂಗಳೂರು ಇವರಿಗೆ.
5. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಯಾದಗಿರಿ ಜಿಲ್ಲೆ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
6. ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಯಾದಗಿರಿ ಸೂಚನ ಫಲಕಕ್ಕೆ
7. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, **ಯಾದಗಿರಿ.**
8. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, **ಶೋರಾಪೂರ/ ಶಹಾಪೂರ.**
9. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, **ಶಹಾಪೂರ.**
10. ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, **ಯಾದಗಿರಿ/ ಶೋರಾಪೂರ/ ಶಹಾಪೂರ.**

**ಇವರಿಗೆ, ನೇಮಕಾತಿ ಅಧಿಸೂಚನೆಯನ್ನು ತಮ್ಮ ನ್ಯಾಯಾಲಯದ ಸೂಚನೆ ಫಲಕದಲ್ಲಿ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.**

11. ತಂತ್ರಾಂಶ ತಂತ್ರಜ್ಞರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಯಾದಗಿರಿ ವೆಬಸೈಟನಲ್ಲಿ ಪ್ರಕಟಿಸಲು.

**// ಆದೇಶದ ಮೇರೆಗೆ //**

sd/-

**ಮುಖ್ಯ ಆಡಳಿತಾಧಿಕಾರಿಗಳು**

**ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**

**ಯಾದಗಿರಿ.**